# ತುಮಕೂರು ವಿಶ್ವವಿದ್ಯಾನಿಲಯ

**ಸಂಖ್ಯೆ:ತುವಿ:ಸಿಬ್ಬಂದಿ-2035:2024/25** **ದಿನಾಂಕ:01.06.2024**

## : ಸುತ್ತೋಲೆ :

**ವಿಷಯ: ವಿಶೇಷ ಸಾಂದರ್ಭಿಕ ರಜೆ ರಜೆ ಘೋಷಿಸಿರುವ ಬಗ್ಗೆ**

ಉಲ್ಲೇಖ: 1. ಸರ್ಕಾರದ ಅಧೀನ ಕಾರ್ಯದರ್ಶಿ-1, ಸಿಆಸು ಇಲಾಖೆ (ರಾಜ್ಯ ಶಿಷ್ಟಾಚಾರ), ಬೆಂಗಳೂರು ಇವರ ಅಧಿಸೂಚನೆ ಸಂಖ್ಯೆ: ಸಿಆಸುಇ 17 ಹೆಚ್‌ಹೆಚ್‌ಎಲ್ 2024, ದಿನಾಂಕ: 29.05.2024

2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 01.06.2024.

*****

ವಿಶ್ವವಿದ್ಯಾನಿಲಯದ ಎಲ್ಲಾ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ಸರ್ಕಾರದ ಉಲ್ಲೇಖ (1)ರ ಅಧಿಸೂಚನೆಯಲ್ಲಿ ಕರ್ನಾಟಕ ವಿಧಾನ ಪರಿಷತ್ತಿಗೆ ಪದವೀಧರ ಹಾಗೂ ಶಿಕ್ಷಕರ ಕ್ಷೇತ್ರಗಳಿಗೆ ಚುನಾವಣೆಯನ್ನು ನಡೆಸಲು ಘೋಷಿಸಲಾಗಿರುವುದರಿಂದ ಖಾಯಂ ಅಥವಾ ದಿನಗೂಲಿ ಮೇಲೆ ಕೆಲಸ ನಿರ್ವಹಿಸುತ್ತಿರುವ ಪದವೀಧರರು ಹಾಗೂ ಶಿಕ್ಷಕರು ಮತದಾನ ಮಾಡಲು ಅನುಕೂಲವಾಗುವಂತೆ ಅರ್ಹ ಮತದಾರರಿಗೆ ಮತ ಚಲಾಯಿಸಲು ದಿನಾಂಕ:03.06.2024 ರಂದು ವಿಶೇಷ ಸಾಂದರ್ಭಿಕ ರಜೆ ಮಂಜೂರು ಮಾಡುವಂತೆ ಆದೇಶಿರುವ ಹಿನ್ನೆಲೆಯಲ್ಲಿ ವಿಶ್ವವಿದ್ಯಾನಿಲಯ, ಸ್ನಾತಕೋತ್ತರ ಅಧ್ಯಯನ ವಿಭಾಗಗಳು ಹಾಗೂ ಘಟಕ ಕಾಲೇಜುಗಳ ಅರ್ಹ ಪದವೀಧರರಿಗೆ ಹಾಗೂ ಶಿಕ್ಷಕರುಗಳಿಗೆ ಮತ ಚಲಾಯಿಸಲು ದಿನಾಂಕ:03.06.2024ರಂದು ವಿಶೇಷ ಸಾಂದರ್ಭಿಕ ರಜೆ ಘೋಷಣೆ ಮಾಡಲಾಗಿದೆ.

**ಆದೇಶದ ಮೇರೆಗೆ**

**ಉಪಕುಲಸಚಿವರು**

ಉಪಕುಲಸಚಿವರು
(ಸಿಬ್ಬಂದಿ ವಿಭಾಗ)
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ

1. ಕುಲಸಚಿವರು (ಮೌಲ್ಯಮಾಪನ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಕಾರ್ಯಪಾಲಕ ಅಭಿಯಂತರರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಎಲ್ಲಾ ಮುಖ್ಯಸ್ಥರು/ಸಂಯೋಜಕರು, ಸ್ನಾತಕೋತ್ತರ ವಿಭಾಗಗಳು, ತು.ವಿ.ತು.
5. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಕಲಾ ಕಾಲೇಜು, ತುಮಕೂರು.
6. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು.
7. ಉಪಗ್ರಂಥಪಾಲರು, ವಿಶ್ವವಿದ್ಯಾನಿಲಯ ಗ್ರಂಥಾಲಯ, ತುಮಕೂರು.
20. ಸಂಯೋಜಕರು, ಕ್ರೀಡಾ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ.
8. ಮೇಲ್ವಿಚಾರಕರು, ವಿಶ್ವವಿದ್ಯಾನಿಲಯ ಅತಿಥಿಗೃಹ, ತು.ವಿ.ತು.
9. ನಿರ್ದೇಶಕರು, ಡಾ. ಅಂಬೇಡ್ಕರ್ ಅಧ್ಯಯನ ಕೇಂದ್ರ, ತು.ವಿ.ತು.
10. ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ಸಮಿತಿ, ತು.ವಿ.ತು.
11. ನಿರ್ದೇಶಕರು, ಸಂಶೋಧನೆ, ತುಮಕೂರು ವಿಶ್ವವಿದ್ಯಾನಿಲಯ.
12. ಸಂಯೋಜನಾಧಿಕಾರಿ, ಎನ್.ಎಸ್.ಎಸ್. ಘಟಕ, ತು.ವಿ.ತು.
13. ಎಲ್ಲಾ ವಿಭಾಗಗಳ ಉಪಕುಲಸಚಿವರು, ತುಮಕೂರು ವಿಶ್ವವಿದ್ಯಾನಿಲಯ.
14. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿ, ತುಮಕೂರು ವಿಶ್ವವಿದ್ಯಾನಿಲಯ.
15. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
16. ಕಚೇರಿ ಪ್ರತಿ.

(1 ರಿಂದ 15) ತಮ್ಮ ಅಧೀನದಲ್ಲಿರುವ ಎಲ್ಲಾ ಸಿಬ್ಬಂದಿಗಳ ಗಮನಕ್ಕೆ ತರಲು ಸೂಚಿಸಿದೆ.

# ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 17 ಹೆಚ್‌ಹೆಚ್‌ಎಲ್ 2024

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ:29.05.2024

## ಅಧಿಸೂಚನೆ

ದಿನಾಂಕ:03.06.2024ರ ಸೋಮವಾರದಂದು ಕರ್ನಾಟಕ ವಿಧಾನ ಪರಿಷತ್ತಿಗೆ ಈ ಕೆಳಕಂಡ ಪದವೀಧರ ಹಾಗೂ ಶಿಕ್ಷಕರ ಕ್ಷೇತ್ರಗಳಿಗೆ ದ್ವೈವಾರ್ಷಿಕ ಚುನಾವಣೆಯನ್ನು ನಡೆಸಲು ಘೋಷಿಸಲಾಗಿರುತ್ತದೆ.

| ಕ್ರಮ ಸಂಖ್ಯೆ | ಕ್ಷೇತಗಳು | ವ್ಯಾಪ್ತಿಗೊಳಪಡುವ ಜಿಲ್ಲೆಗಳು |
|---|---|---|
| 1 | ಕರ್ನಾಟಕ ಈಶಾನ್ಯ ಪದವೀಧರ ಕ್ಷೇತ್ರ | ಬೀದರ್, ಗುಲ್ಬರ್ಗ, ರಾಯಚೂರು & ಕೊಪ್ಪಳ, ಬಳ್ಳಾರಿ (ದಾವಣಗೆರೆ ಜಿಲ್ಲೆಯ ಹರಪನ ಹಳ್ಳಿ ತಾಲ್ಲೂಕು ಒಳಗೊಂಡಂತೆ) |
| 2 | ಕರ್ನಾಟಕ ನೈರುತ್ಯ ಪದವೀಧರ ಕ್ಷೇತ್ರ | ಶಿವಮೊಗ್ಗ (ದಾವಣಗೆರೆ ಜಿಲ್ಲೆಯ ಚನ್ನಗಿರಿ & ಹೊನ್ನಾಳಿ ತಾಲ್ಲೂಕುಗಳನ್ನೊಳಗೊಂಡಂತೆ), ದಕ್ಷಿಣ ಕನ್ನಡ, ಉಡುಪಿ, ಚಿಕ್ಕಮಗಳೂರು ಹಾಗೂ ಕೊಡಗು |
| 3 | ಬೆಂಗಳೂರು ಪದವೀಧರ ಕ್ಷೇತ್ರ | ಬೆಂಗಳೂರು ನಗರ ಹಾಗೂ ಬೆಂಗಳೂರು ಗ್ರಾಮಾಂತರ |
| 4 | ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರ | ಚಿತ್ರದುರ್ಗ, ದಾವಣಗೆರೆ (ಚನ್ನಗಿರಿ, ಹೊನ್ನಾಳಿ & ಹರಪನಹಳ್ಳಿ ತಾಲ್ಲೂಕುಗಳನ್ನು ಹೊರತುಪಡಿಸಿ), ತುಮಕೂರು ಹಾಗೂ ಕೋಲಾರ |
| 5 | ಕರ್ನಾಟಕ ನೈರುತ್ಯ ಶಿಕ್ಷಕರ ಕ್ಷೇತ್ರ | ಶಿವಮೊಗ್ಗ (ದಾವಣಗೆರೆ ಜಿಲ್ಲೆಯ ಚನ್ನಗಿರಿ & ಹೊನ್ನಾಳಿ ತಾಲ್ಲೂಕುಗಳನ್ನೊಳಗೊಂಡಂತೆ), ದಕ್ಷಿಣ ಕನ್ನಡ, ಉಡುಪಿ, ಚಿಕ್ಕಮಗಳೂರು ಮತ್ತು ಕೊಡಗು |
| 6 | ಕರ್ನಾಟಕ ದಕ್ಷಿಣ ಶಿಕ್ಷಕರ ಕ್ಷೇತ್ರ | ಮೈಸೂರು, ಚಾಮರಾಜ ನಗರ, ಮಂಡ್ಯ ಹಾಗೂ ಹಾಸನ |

ಈ ಮೇಲಿನ ವಿಧಾನ ಪರಿಷತ್ ಮತ ಕ್ಷೇತ್ರಗಳಲ್ಲಿನ ಸರ್ಕಾರಿ ಹಾಗೂ ಖಾಸಗಿ ಶಾಲಾ ಕಾಲೇಜುಗಳು, ಅನುದಾನಿತ ಹಾಗೂ ಅನುದಾನ ರಹಿತ ವಿದ್ಯಾ ಸಂಸ್ಥೆಗಳು, ಎಲ್ಲಾ ಶೈಕ್ಷಣಿಕ ಸಂಸ್ಥೆಗಳು, ರಾಜ್ಯ ಹಾಗೂ ಕೇಂದ್ರ ಸರ್ಕಾರದ ಕಛೇರಿಗಳು, ರಾಷ್ಟ್ರೀಕೃತ ಹಾಗೂ ಇತರ ಬ್ಯಾಂಕುಗಳು, ಕೇಂದ್ರ ಹಾಗೂ ರಾಜ್ಯ ಸರ್ಕಾರದ ಕಾರ್ಖಾನೆಗಳು, ಉಳಿದ ಕೈಗಾರಿಕ ಸಂಸ್ಥೆಗಳು ಹಾಗೂ ಸಹಕಾರ ರಂಗದ ಸಂಘ ಸಂಸ್ಥೆಗಳಲ್ಲಿ, ಎಲ್ಲಾ ವ್ಯವಹಾರಿಕ ಸಂಸ್ಥೆಗಳಲ್ಲಿ, ಔದ್ಯಮಿಕ ಸಂಸ್ಥೆಗಳಲ್ಲಿ ಮತ್ತು ಇತರ Establishmentಗಳಲ್ಲಿ ಖಾಯಂ ಆಗಿ ಅಥವಾ ದಿನಗೂಲಿ ಮೇಲೆ ಕೆಲಸ ನಿರ್ವಹಿಸುವ **ಪದವೀಧರರು ಹಾಗೂ ಶಿಕ್ಷಕರು ಮತದಾನ ಮಾಡಲು ಅನುಕೂಲವಾಗುವಂತೆ ಅಂತಹ ಅರ್ಹ ಮತದಾರರಿಗೆ ಸೀಮಿತವಾದಂತೆ** ಮತ ಚಲಾಯಿಸಲಿರುವ ಮತದಾರರಿಗೆ ದಿನಾಂಕ:03.06.2024ರ ಸೋಮವಾರದಂದು ವಿಶೇಷ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿಜಯಕುಮಾರ ಹೆಚ್ ಬಿ) 29/05
ಸರ್ಕಾರದ ಅಧೀನ ಕಾರ್ಯದರ್ಶಿ-1,
ಸಿಆಸು ಇಲಾಖೆ (ರಾಜ್ಯ ಶಿಷ್ಟಾಚಾರ)

**ಇವರಿಗೆ,**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು.

29/5